# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 393
ಸದಸ್ಯರ ಹೆಸರು : ಡಾ: ಧನಂಜಯ ಸರ್ಜಿ
(ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸಬೇಕಾದ ದಿನಾಂಕ : 13-08-2025

| | ಪ್ರಶ್ನೆ | ಉತ್ತರ |
|---|---|---|
| ಅ. | ಶಿವಮೊಗ್ಗ ಆರ್.ಟಿ.ಒ. ಕಛೇರಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು: | ಶಿವಮೊಗ್ಗ ಆರ್.ಟಿ.ಒ. ಕಛೇರಿಗೆ ಒಟ್ಟು 42 ವಿವಿಧ ವೃಂದದ ಹುದ್ದೆಗಳು ಮಂಜೂರಾಗಿದ್ದು, 17 ಹುದ್ದೆಗಳು ಭರ್ತಿಯಾಗಿರುತ್ತವೆ ಹಾಗೂ 25 ಹುದ್ದೆಗಳು ಖಾಲಿ ಇರುತ್ತವೆ. ಹಾಗಾಗಿ ಸದರಿ ಕಛೇರಿಯಲ್ಲಿ ಹುದ್ದೆಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಸಾರಿಗೆ ಇಲಾಖೆಯಲ್ಲಿ ವಿವಿಧ ವೃಂದದ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪ್ರಸ್ತುತ ಜಾರಿಯಲ್ಲಿದ್ದು, ಸದರಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಶಿವಮೊಗ್ಗ ಪ್ರಾದೇಶಿಕ ಸಾರಿಗೆ ಕಛೇರಿಗೆ ಸಿಬ್ಬಂದಿಯನ್ನು ನಿಯೋಜಿಸಲು ಆದ್ಯತೆಯ ಮೇರೆಗೆ ಕ್ರಮ ವಹಿಸಲಾಗುವುದು. |
| ಆ. | ಶಿವಮೊಗ್ಗ ಆರ್.ಟಿ.ಒ. ಕಛೇರಿಯಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | |
| ಇ. | ಶಿವಮೊಗ್ಗ ಆರ್.ಟಿ.ಒ. ಕಛೇರಿಯಲ್ಲಿ ದಲ್ಲಾಳಿಗಳ ಹಾವಳಿ ಮಿತಿಮೀರಿದ್ದು ಇದನ್ನು ತಡೆಯುವ ನಿಟ್ಟಿನಲ್ಲಿ ಇಲಾಖೆ ಕೈಗೊಂಡಿರುವ ಕ್ರಮಗಳೇನು: | ಸಾರ್ವಜನಿಕರು ಮಧ್ಯವರ್ತಿಗಳನ್ನು ಸಂಪರ್ಕಿಸದೇ ನೇರವಾಗಿ ಕಛೇರಿಯ ಅಧಿಕಾರಿ / ಸಿಬ್ಬಂದಿಯವರನ್ನು ಭೇಟಿ ಮಾಡಿ ಅವರ ಕೆಲಸಗಳನ್ನು ಮಾಡಿಸಿಕೊಳ್ಳ ಬೇಕೆಂದು ಕಛೇರಿಯ ಆವರಣದಲ್ಲಿ ಸೂಚನಾ ಫಲಕಗಳನ್ನು ಹಾಕಲಾಗಿದೆ ಹಾಗೂ ಆರ್.ಟಿ.ಒ. ಕಛೇರಿಗಳಲ್ಲಿ ದಲ್ಲಾಳಿಗಳು ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮಕೈಗೊಳ್ಳಲಾಗುವುದು.<br><br>ಅಲ್ಲದೆ, ದಿನಾಂಕ: 01-11-2021 ರಿಂದ ಸಾರಿಗೆ ಇಲಾಖೆಯಲ್ಲಿನ **ನಲವತ್ತೈದು** ಸೇವೆಗಳನ್ನು ಆನ್‌ಲೈನ್ ಮತ್ತು ಸಂಪರ್ಕರಹಿತ ಸೇವೆಗಳಾಗಿ ನಿರ್ವಹಿಸಲು ಅನುಷ್ಠಾನಗೊಳಿಸಲಾಗಿದ್ದು, ಬಹುತೇಕ ಸೇವೆಗಳಿಗೆ ಸಾರ್ವಜನಿಕರು ಕಚೇರಿಗೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.<br><br>ಅಲ್ಲದೆ, ಸಾರ್ವಜನಿಕರಿಗೆ ಅವರುಗಳ ವಾಹನ ಅನುಜ್ಞಾ ಪತ್ರ ಮತ್ತು ವಾಹನ ನೋಂದಣಿಯ ಸ್ಮಾರ್ಟ್ ಕಾರ್ಡ್‌ಗಳನ್ನು ಅವರ ಮನೆಯ ವಿಳಾಸಗಳಿಗೆ ಅಂಚೆ ಸೇವೆಯ ಮೂಲಕ ತಲುಪಿಸಲಾಗುತ್ತಿದೆ. ಇಲಾಖೆಯಲ್ಲಿ ವಾಹನ್-4, ಸಾರಥಿ-4 ಮತ್ತು ಇ-ಪೇಮೆಂಟ್ ಆಫ್ ಟ್ಯಾಕ್ಸ್ ನಂತಹ ಆನ್‌ಲೈನ್ ಸೇವೆಗಳನ್ನು ರಾಜ್ಯದ ಎಲ್ಲಾ ಕಛೇರಿಗಳಲ್ಲಿ ಜಾರಿಗೆ ತರಲಾಗಿದೆ ಹಾಗೂ ಸಾರ್ವಜನಿಕರು ಕರ್ನಾಟಕ-1, ಬೆಂಗಳೂರು-1 ಮತ್ತು ಮೊಬೈಲ್-1 ಎಂಬ ಆ್ಯಪ್‌ಗಳಲ್ಲಿ ವಾಹನ ವಿವರ / ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ. |

| | ಪ್ರಶ್ನೆ | ಉತ್ತರ |
|---|---|---|
| ಈ. | ಶಿವಮೊಗ್ಗಕ್ಕೆ ಟ್ರಕ್ ಟರ್ಮಿನಲ್ ಅವಶ್ಯವಿದ್ದು, ಈ ಕುರಿತು ಸರ್ಕಾರ ಏನು ಕ್ರಮ ಕೈಗೊಂಡಿದೆ: | ಟ್ರಕ್ ಟರ್ಮಿನಲ್ ನಿರ್ಮಿಸಲು ಸರ್ಕಾರಿ ಜಮೀನು ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದ್ದು, ಜಮೀನು ನೀಡಿದ ನಂತರ ನಿಯಮಾನುಸಾರ ಪರಿಶೀಲಿಸಿ ಟ್ರಕ್ ಟರ್ಮಿನಲ್ ನಿರ್ಮಿಸಲು ಕ್ರಮಕೈಗೊಳ್ಳಲಾಗುವುದು. |
| ಉ. | ಲಾರಿ ಮತ್ತು ಬಸ್ಸುಗಳಿಗೆ ಪ್ಯಾನಿಕ್ ಬಟನ್ ಅಳವಡಿಸಲು ಕಡ್ಡಾಯಗೊಳಿಸಿರುವುದರಿಂದ ಪ್ಯಾನಿಕ್ ಬಟನ್ ಅಳವಡಿಸುವ ಸಂದರ್ಭದಲ್ಲಿ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಕೇಂದ್ರ ಮೋಟಾರು ವಾಹನ ನಿಯಮಗಳು 1989ರ ನಿಯಮ 125(ಹೆಚ್) ರಲ್ಲಿನ ಅವಕಾಶಗಳನ್ನು ಬಳಸಿಕೊಂಡು ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯ, ನವದೆಹಲಿ ರವರು ಹೊರಡಿಸಿರುವ ಅಧಿಸೂಚನೆ ಹಾಗೂ ಮಾರ್ಗಸೂಚಿಗಳ ಮೇರೆಗೆ, ಮಹಿಳೆ ಮತ್ತು ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ನಿರ್ಭಯ ಯೋಜನೆಯಡಿ ಸಾರ್ವಜನಿಕ ಸೇವಾ ವಾಹನಗಳು ಅಂದರೆ ಮಜಲು ವಾಹನ, ಶಾಲಾ ವಾಹನ, ಖಾಸಗಿ ಸೇವಾ ವಾಹನ, ಮ್ಯಾಕ್ಸಿ ಕ್ಯಾಬ್, ಒಪ್ಪಂದ ವಾಹನ, ಮೋಟಾರ್ ಕ್ಯಾಬ್ ಹಾಗೂ ರಾಷ್ಟ್ರೀಯ ರಹದಾರಿ ಹೊಂದಿದ ಸರಕು ಸಾಗಣೆ ವಾಹನಗಳಿಗೆ Vehicle Location Tracking Device & Emergency Button ಅಳವಡಿಸುವ ಯೋಜನೆಯನ್ನು ಜಾರಿಗೊಳಿಸ-ಲಾಗಿರುತ್ತದೆ. ಸದರಿ ಸಾಧನಗಳ ಅಳವಡಿಕೆಯಿಂದ ಕೆಳಕಂಡ ಪ್ರಯೋಜನೆಗಳಿರುತ್ತವೆ.<br><br>1. ವಾಹನವು ಹಾದುಹೋಗುವ ಮಾರ್ಗವನ್ನು ಪರಿಶೀಲಿಸಿ ನಕ್ಷೆಯಲ್ಲಿ ವಾಹನದ ಸ್ಥಳವನ್ನು ಗುರುತಿಸಲು ಸಹಾಯಕವಾಗುತ್ತದೆ.<br>2. ವರ್ಚುವಲ್ ಜಿಯೋ-ಫೆನ್ಸಿಂಗ್ ಮೂಲಕ ಮಜಲು ವಾಹನಗಳು ಹಾದುಹೋಗುವ ಅನಧಿಕೃತ ಮಾರ್ಗವನ್ನು ಗುರುತಿಸಲು ಸಾಧ್ಯವಾಗುತ್ತದೆ.<br>3. ಅಪಘಾತ ಸ್ಥಳ ಪತ್ತೆ ಮಾಡಲು ಸಹಾಯಕವಾಗುತ್ತದೆ.<br>4. ನಿಖರವಾದ ಸ್ಥಳ ಮತ್ತು ವೇಗದ ವಿವರಗಳನ್ನು ಪತ್ತೆಹಚ್ಚಲು ಸಹಾಯಕವಾಗುತ್ತದೆ.<br>5. ಮಹಿಳೆಯರು ಮತ್ತು ಮಕ್ಕಳು ಅಥವಾ ಇತರೆ ಪ್ರಯಾಣಿಕರು ತುರ್ತು ಸಂದರ್ಭಗಳಲ್ಲಿ ಪ್ಯಾನಿಕ್ ಬಟನ್ ಅನ್ನು ಉಪಯೋಗಿಸಿದಲ್ಲಿ ಅದರ ಸಂಕೇತವು ನಿಯಂತ್ರಣ ಕೊಠಡಿಗೆ ರವಾನೆಯಾಗುತ್ತದೆ. ಸದರಿ ಸಂಕೇತವನ್ನು ಕೂಲಂಕುಷ ವಾಗಿ ಪರಿಶೀಲಿಸಿ, ಪೊಲೀಸ್ ಇಲಾಖೆಯ ಸಮನ್ವಯದ ಅವಶ್ಯಕತೆ ಇದ್ದಲ್ಲಿ, ಪೊಲೀಸ್ ನಿಯಂತ್ರಣ ಕೊಠಡಿಗೆ ರವಾನಿಸಲಾಗುತ್ತದೆ. ಈ ಮೂಲಕ ಸಂಭವನೀಯ ಅವಘಡಗಳನ್ನು ತಪ್ಪಿಸಲು ಸಹಾಯಕವಾಗುತ್ತದೆ.<br>6. ವಾಹನದ ವಿವರಗಳನ್ನು ಬಳಸಿಕೊಂಡು ಮುಂದಿನ ದಿನಗಳಲ್ಲಿ ವಾಹನ ಮಾಲೀಕರಿಗೆ ಸಹಕಾರಿಯಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ. |

| | ಪ್ರಶ್ನೆ | ಉತ್ತರ |
|---|---|---|
| | | ಸದರಿ ಯೋಜನೆಯ ಭಾಗವಾಗಿ ಇಲಾಖೆಯು Command and Control Centre ಅನ್ನು ಸಾರಿಗೆ ಆಯುಕ್ತರ ಕಛೇರಿಯಲ್ಲಿ ಸ್ಥಾಪಿಸಲಾಗಿದ್ದು, ಈ ಕೇಂದ್ರವು ದಿನಾಂಕ:19-06-2024 ರಂದು ಉದ್ಘಾಟನೆಗೊಂಡು ಕಾರ್ಯ ನಿರ್ವಹಿಸುತ್ತಿದೆ. ಸದರಿ ಕೇಂದ್ರವು 24x7 ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿದೆ.<br><br>ಸದರಿ ಯೋಜನೆಯಡಿ ವಾಹನಗಳಿಗೆ Vehicle Location Tracking (VLT) Devices with Emergency Panic Buttons ಅಳವಡಿಸಲು 12 ಕಂಪೆನಿಗಳನ್ನು ಅರ್ಹ ಎಂದು ನಿರ್ಣಯಿಸಿ ಕಾರ್ಯಾದೇಶ ನೀಡಲಾಗಿದೆ. ವಾಹನ ಮಾಲೀಕರುಗಳಿಗೆ ಅರ್ಹತಾ ಪತ್ರ ನವೀಕರಣ ಸಮಯದಲ್ಲಿ ವಾಹನಗಳಿಗೆ VLTD ಸಾಧನಗಳನ್ನು ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.<br><br>ಮುಂದುವರೆದು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು WP No.31170/2024 (MV)ಕ್ಕೆ ಸಂಬಂಧಿಸಿದಂತೆ, ದಿನಾಂಕ:21-01-2025 ರಂದು ನೀಡಿದ ನಿರ್ದೇಶನದ ಮೇರೆಗೆ, ಸಾರಿಗೆ ಇಲಾಖೆಯಿಂದ ಅನುಮೋದನೆ ಪಡೆದ 12 ತಯಾರಿಕಾ ಕಂಪೆನಿಗಳೊಂದಿಗೆ ನಡೆಸಿದ ದರ ಸಂಧಾನ ಸಭೆಯಲ್ಲಿ, ಸಾಧನಗಳಿಗೆ ವಿಧಿಸಲಾಗುತ್ತಿರುವ ದರಗಳ ಕುರಿತು ಚರ್ಚೆ ನಡೆಸಿದ್ದು, ವಿವಿಧ ಆಸನ ಸಾಮರ್ಥ್ಯದ / ವರ್ಗದ ವಾಹನಗಳಿಗೆ Vehicle Location Tracking (VLT) Devices & Emergency Button ಸಾಧನಗಳಿಗೆ ನಿಗದಿಪಡಿಸಿದ ದರಗಳನ್ನು ಪಡೆಯಲು ಸದರಿ ಸಂಸ್ಥೆಗಳು ಒಪ್ಪಿರುತ್ತಾರೆ. ಅದರಂತೆ ದರಗಳನ್ನು ಪಡೆಯಲು ಎಲ್ಲಾ ಅನುಮೋದಿತ ಕಂಪೆನಿಗಳಿಗೆ ತಿಳಿಸಲಾಗಿದೆ.<br><br>ಈ ಯೋಜನೆಯಿಂದ ಕರ್ನಾಟಕ ರಾಜ್ಯದಲ್ಲಿ ಅದರಲ್ಲೂ ಸಾರಿಗೆ ಕ್ಷೇತ್ರದಲ್ಲಿ ಬೃಹತ್ ಮಟ್ಟದಲ್ಲಿ ಡಿಜಿಟಲ್ ತಂತ್ರಜ್ಞಾನವನ್ನು ಬಳಸಿಕೊಳ್ಳುವ ಮೂಲಕ ಸಾರ್ವಜನಿಕ ಪ್ರಯಾಣಿಕರ ಅದರಲ್ಲಿಯೂ ಮಹಿಳೆ ಮತ್ತು ಮಕ್ಕಳ ಸುರಕ್ಷತೆ ಮತ್ತು ರಸ್ತೆ ಸುರಕ್ಷತೆಯನ್ನು ಹೆಚ್ಚಿಸಿಕೊಳ್ಳಬಹುದಾಗಿದೆ.<br><br>ಮೇಲ್ಕಂಡ ಅಂಶಗಳ ಮೇರೆಗೆ, ಲಾರಿ ಮತ್ತು ಬಸ್ಸುಗಳಿಗೆ ಪ್ಯಾನಿಕ್ ಬಟನ್ ಅಳವಡಿಸುವ ಸಂದರ್ಭದಲ್ಲಿ ತೊಂದರೆಯಾಗುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಟಿಡಿ 56 ಟಿಡಿಕ್ಯೂ 2025**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು